**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **775 (744)** |
| **ಸದಸ್ಯರ ಹೆಸರು** | : | **ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **16.12.2024** |
| **ಉತ್ತರಿಸುವ ಸಚಿವರು** | : | **ಉನ್ನತ ಶಿಕ್ಷಣ ಸಚಿವರು** |

| **ಕ್ರ. ಸಂ.** | **ಪ್ರಶ್ನೆ** | **ಉತ್ತರ** |
|---|---|---|
| **ಅ)** | ಬೀದರ್ ಜಿಲ್ಲೆಯಲ್ಲಿ ಎರಡು ವರ್ಷಗಳ ಹಿಂದೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಿ 4 ಕೋರ್ಸುಗಳಿಗೆ ಮಂಜೂರಾತಿ ನೀಡಿ ಪ್ರಸ್ತುತ 452 ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದು, ಇಲ್ಲಿಯವರೆಗೆ ಉಪನ್ಯಾಸಕರನ್ನು ನೇಮಕ ಮಾಡದೇ 18 ಜನ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| **ಆ)** | ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಖಾಯಂ ಉಪನ್ಯಾಸಕರನ್ನು ನೇಮಕ ಮಾಡದಿರಲು ಕಾರಣವೇನು; | ಬೀದರ್ ಜಿಲ್ಲೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 2022-23ನೇ ಸಾಲಿನಿಂದ 02 ಕೋರ್ಸ್‌ಗಳೊಂದಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲಾಗಿದ್ದು, ಪ್ರಸ್ತುತ 04 ಕೋರ್ಸ್‌ಗಳೊಂದಿಗೆ ಕಾರ್ಯ ನಿರ್ವಹಿಸುತ್ತಿದೆ.<br><br>ಈ ಕಾಲೇಜಿನ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆ ಉಂಟಾಗದಂತೆ 25 ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿದೆ.<br><br>ಈ ಕಾಲೇಜಿಗೆ ಬೋಧಕ/ಬೋಧಕೇತರ ಹುದ್ದೆಗಳು ಸೃಜನೆಯಾಗದಿರುವುದರಿಂದ ಖಾಯಂ ಉಪನ್ಯಾಸಕರನ್ನು ನೇಮಕ ಮಾಡಿರುವುದಿಲ್ಲ. |

| | | |
|---|---|---|
| ಇ) | ಈ ಕಾಲೇಜಿನಲ್ಲಿ ಖಾಯಂ ಉಪನ್ಯಾಸಕರನ್ನು ಮತ್ತು ಇತರೆ ಸಿಬ್ಬಂದಿಯನ್ನು ಯಾವಾಗ ನೇಮಕ ಮಾಡಲಾಗುವುದು? (ಮಾಹಿತಿ ಒದಗಿಸುವುದು) | ಸದರಿ ಸಂಸ್ಥೆಗೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತಿನ (AICTE) ನಿಯಮಾವಳಿಗಳನ್ವಯ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ಸೃಜಿಸಿ ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಇಡಿ 212 ಡಿಟಿಇ 2024**

(ಡಾ.ಎಂ.ಸಿ.ಸುಧಾಕರ್)
ಉನ್ನತ ಶಿಕ್ಷಣ ಸಚಿವರು